## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ ರವರು ನಿಯಮ 72ರ ಮೇರೆಗೆ ನೀಡಿರುವ ಸೂಚನೆಗೆ ಉತ್ತರ.

### ವಿಷಯ

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಪ್ರಕಾರ ದಿನಾಂಕ 01/04/1998 ರಂದು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರವು ಅಸ್ತಿತ್ವಕ್ಕೆ ಬಂದಿದೆ. ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿ 10 ಕಿ.ಮೀ ಪ್ರದೇಶವನ್ನು ಒಳಗೊಂಡಿದೆ. ಒಟ್ಟು 12 ಗ್ರಾಮಗಳು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬಂದಿವೆ. ಕೊಪ್ಪಳ ನಗರ ವ್ಯಾಪ್ತಿಯಲ್ಲಿಯೇ 275 ಕ್ಕೂ ಹೆಚ್ಚು ಲೇಔಟ್‌ಗಳಿರುವ ಅಂದಾಜಿದೆ. ಈಗ ಉದ್ಭವಸಿರುವ ಫಾರಂ ನಂ. 3 ಸಾರ್ವಜನಿಕರಿಗೆ ವಿತರಿಸುತ್ತಿಲ್ಲ ಎಂಬ ವಿಷಯದ ಕುರಿತು.

### ಉತ್ತರ

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿಗಳ ನಿರ್ವಹಣೆಗೆ ಇ-ಆಸ್ತಿ ತಂತ್ರಾಂಶವನ್ನು ಬಳಕೆಮಾಡಲಾಗುತ್ತಿದ್ದು, ತಂತ್ರಾಂಶದಲ್ಲಿ ಆಸ್ತಿಯ ಮಾಹಿತಿಯನ್ನು ದಾಖಲಿಸುವ ಸಮಯದಲ್ಲಿ ನಿರ್ದಿಷ್ಟಪಡಿಸಿದ ದಾಖಲೆಗಳನ್ನು ಅಪ್‌ಲೋಡ್ ಮಾಡಿದಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದಂತಹ ಎಲ್ಲಾ ಅಧಿಕೃತ ಆಸ್ತಿಗಳಿಗೆ ನಮೂನೆ-3 (ಫಾರಂ-03) ನೀಡಲಾಗುತ್ತದೆ.

ನಗರ ಪ್ರದೇಶದಲ್ಲಿ ಭೂ ಪರಿವರ್ತಿಸಿದ ಭೂ ಪರಿವರ್ತಿಸದ ಜಮೀನುಗಳಿಗೆ ವಿನ್ಯಾಸ ಅನುಮೋದನೆ ಪಡೆಯದೇ ಅನಧಿಕೃತ ಬಡಾವಣೆ ಬಡಾವಣೆಗಳನ್ನು ನಿರ್ಮಾಣ ಮಾಡಿ ನಿವೇಶನಗಳನ್ನು ನೊಂದಣಿ ಮಾಡಿಕೊಂಡು ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸುವುದರಿಂದ ಆಗುವ ಪ್ರತಿಕೂಲ ಪರಿಣಾಮಗಳನ್ನು ಗಮನಿಸಲಾಗಿ ನಗರ ಪ್ರದೇಶಗಳಲ್ಲಿ ಉದ್ಯಾನವನ/ಬಯಲು ಜಾಗಗಳ ಕೊರತೆ, ನಾಗರೀಕ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ವಿಫಲತೆ, ವ್ಯವಸ್ಥಿತವಾದ ರಸ್ತೆಯ ಪರಿಚಲನೆ, ಮೂಲಭೂತ ಸೌಕರ್ಯದ ಕೊರತೆ ಹಾಗೂ ಯೋಜಿತ ಬೆಳವಣಿಗೆಗಳಲ್ಲಿ ತೊಡಕುಗಳಿರುವುದು ಕಂಡು ಬರುತ್ತದೆ. ಇಂತಹ ಬೆಳವಣಿಗೆಗಳಿಗೆ ಅವಕಾಶ ಕಲ್ಪಿಸದೇ ಅಭಿವೃದ್ಧಿ ಬೆಳವಣಿಗೆಗಳಲ್ಲಿ ಪಾರದರ್ಶಕತೆ ಸಾರ್ವಜನಿಕ ಹಿತದೃಷ್ಟಿ ಹಾಗೂ ನಾಗರೀಕ ಸ್ನೇಹಿ ಸುಧಾರಣೆಗಳನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ವಿನ್ಯಾಸಗಳಿಗೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯದೇ ನಿವೇಶನಗಳನ್ನು ರಚಿಸಿ ಪರಭಾರೆ ಮಾಡುವ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ತಡೆಯುವ ಉದ್ದೇಶದಿಂದ ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಸರ್ಕಾರದ ಸುತ್ತೋಲೆ ಸಂ: ನಅಇ/07/ಟಿಟಿಪಿ/2017 ದಿನಾಂಕ: 22-03-2017 ರಲ್ಲಿ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಸೂಚನೆ ನೀಡಲಾಗಿದೆ. ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: 23350 ಡಿಎಂಎ 121 ಜಿಪಿಎಸ್ 2017-18 ದಿನಾಂಕ: 05.01.2018 ರಲ್ಲಿ ಸಕ್ಷಮ ಪ್ರಾಧಿಕಾರದಿಂದ ಬಡಾವಣೆಯ ನಕ್ಷೆಗೆ ಅನುಮೋದನೆ ಪಡೆಯದೆ ಇದ್ದಲ್ಲಿ ಅಂತಹ ಬಡಾವಣೆಯ ನಿವೇಶನಗಳಿಗೆ ಇ-ಖಾತಾ (ಫಾರಂ-03) ನೀಡಬಾರದೆಂದು ನಗರ ಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗಿದೆ. ಅದರಂತೆ ಅನುಮೋದನೆಗೊಳ್ಳದೆ ಇರುವ 67 ಅನಧಿಕೃತ ವಸತಿ ಬಡಾವಣೆಗಳ ವಿನ್ಯಾಸಗಳಿಗೆ ಕೊಪ್ಪಳ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಮೂನೆ-03 ವಿತರಣೆ ಮಾಡುವುದನ್ನು ನಿಲ್ಲಿಸಲಾಗಿರುತ್ತದೆ.

(ಸಹಿ)

**ಎನ್. ನಾಗರಾಜು (ಎಂ.ಟಿ.ಬಿ)**

ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ

ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.

**ಸಂಖ್ಯೆ: ನಅಇ 334 ಜಿಇಎಲ್ 2022**